ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೦೫

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

**ಶುಕ್ರವಾರ, ದಿನಾಂಕ: ೨೭ನೇ ಜೂನ್, ೨೦೧೪**

---

**ಸಮೂಹ – V**

೧. ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು

೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

೩. ವಸತಿ ಸಚಿವರು

೪. ಅಬಕಾರಿ ಸಚಿವರು

೫. ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು

೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು

೭. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು

---

## ಕನ್ನಡ ಚಲನಚಿತ್ರರಂಗದ ಬೇಡಿಕೆಗಳು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೬೧ (೨೯೯) ಮೂಲ ಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರದ ಮುಂದಿರುವ ಕನ್ನಡ ಚಲನಚಿತ್ರರಂಗದ ಬೇಡಿಕೆಗಳು ಯಾವುವು;

(ಆ) ಅವುಗಳನ್ನು ಈಡೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ;

(ಇ) ಇವುಗಳನ್ನು ಹೊರತುಪಡಿಸಿ ಚಿತ್ರರಂಗದ ಅಭಿವೃದ್ಧಿಗೆ ಸಂಬಂಧಿಸಿದಂತೆ ಸರ್ಕಾರ ಸ್ವಯಂ ಪ್ರೇರಿತವಾಗಿ ಹಮ್ಮಿಕೊಳ್ಳಲು ಉದ್ದೇಶಿಸಿರುವ ನೀತಿ / ಯೋಜನೆಗಳು ಯಾವುವು ?

## ಕರ್ನಾಟಕ ಗೃಹ ಮಂಡಳಿ ನಿರ್ಮಿಸಿರುವ ಪ್ರದೇಶಕ್ಕೆ ಮೂಲಸೌಕರ್ಯಗಳು

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೬೨ (೨೬೩) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ಗೃಹ ಮಂಡಳಿಯು ಬೀದರ್ ನಗರದ ಹೊರಭಾಗದ ಚಿಟ್ಟಾ ಎಂಬ ಗ್ರಾಮದಲ್ಲಿ ಮನೆ ಹಾಗೂ ನಿವೇಶನಗಳನ್ನು ಅಭಿವೃದ್ಧಿಪಡಿಸಿ ಈ ಬಡಾವಣೆಗೆ ಸಾರಿಗೆ ವ್ಯವಸ್ಥೆ ಹಾಗೂ ಮೂಲಸೌಕರ್ಯ ಕಲ್ಪಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಮುಖ್ಯ ರಸ್ತೆಯಿಂದ ಈ ಬಡಾವಣೆಗೆ ಸಂಪರ್ಕ ಕಲ್ಪಿಸುವ ರಸ್ತೆಯ ಅಗಲ ತುಂಬಾ ಚಿಕ್ಕದಾಗಿದ್ದು, ಇದನ್ನು ಅಗಲೀಕರಣಗೊಳಿಸಿ ದ್ವಿಪಥ ರಸ್ತೆ ಮಾಡಿದಲ್ಲಿ ಈ ಬಡಾವಣೆಯಲ್ಲಿ ಮನೆ ಕಟ್ಟಿ ವಾಸಿಸಲು ಜನ ಮುಂದೆ ಬರುವರು ಎಂಬುದನ್ನು ಸರ್ಕಾರ ಗಮನಿಸಿದೆಯೇ ;

(ಇ) ಹಾಗಿದ್ದಲ್ಲಿ, ಈ ರಸ್ತೆಗಳಿಂದ ಮುಂದೆ ಹಾದು ಹೋಗುವುದಕ್ಕೆ ತುಂಬಾ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ರೂಪಿಸಲಾಗಿರುವ ಯೋಜನೆಗಳೇನು ?

## ಪ್ರವಾಸಿ ಸ್ಥಳಗಳಲ್ಲಿ ಅಪಘಾತಗಳು ಮತ್ತು ಮುನ್ನೆಚ್ಚರಿಕೆಯ ಕ್ರಮ

**ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೩ (೨೧೬) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಡ್ಯ ಜಿಲ್ಲೆಯ ಪ್ರವಾಸಿ ಕೇಂದ್ರಗಳಾದ ಶಿಂಷಾ ಜಲಪಾತ (ಗಗನಚುಕ್ಕಿ, ಭರಚುಕ್ಕಿ) ಬಲಮುರಿ, ಮುತ್ತತ್ತಿ, ಮೈಸೂರು ಜಿಲ್ಲೆಯ ತಲಕಾಡು ಇಲ್ಲಿ ಕಳೆದ ಮೂರು ವರ್ಷಗಳಿಂದ ವಿಹಾರಾರ್ಥವಾಗಿ ಬಂದ ಪ್ರವಾಸಿಗರು ಆಕಸ್ಮಿಕವಾಗಿ ನೀರಿನಲ್ಲಿ ಮುಳುಗಿ ಸತ್ತ ಪ್ರಕರಣಗಳೆಷ್ಟು ; ಎಷ್ಟು ಜನ ಸಾವನ್ನಪ್ಪಿದ್ದಾರೆ ; (ವಿವರ ಒದಗಿಸುವುದು)

(ಆ) ಈ ಅಪಘಾತಗಳಿಗೆ ಪ್ರವಾಸೋದ್ಯಮ ಇಲಾಖೆಯ ಉಪೇಕ್ಷೆ ಮತ್ತು ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳದೇ ಇರುವುದು ಕಾರಣವಲ್ಲವೇ ;

(ಇ) ಪೋಲೀಸ್, ಗೃಹರಕ್ಷಕದಳ, ಒಳನಾಡು ಜಲಸಾರಿಗೆ, ನೀರಾವರಿ ಇಲಾಖೆಗಳ ಸಹಯೋಗ ಹಾಗೂ ನೆರವಿನಿಂದ ಈ ಸ್ಥಳಗಳಲ್ಲಿ ಸೂಕ್ತ ಮುನ್ನೆಚ್ಚರಿಕೆ ಹಾಗೂ ಜಾಗ್ರತಾ ವ್ಯವಸ್ಥೆಗಳನ್ನು ಮಾಡಲಾಗುವುದೇ ; ನೈಲನ್ ಹಗ್ಗಗಳು, ದೋಣಿಗಳು, ಜೀವರಕ್ಷಕ ಜಾಕೆಟ್‌ಗಳು, ಸ್ನಾನ ಘಟ್ಟದಲ್ಲಿ ಸರಪಳಿಗಳಿಂದ ಕೂಡಿದ ಕಟ್ಟೆ ಇವುಗಳ ವ್ಯವಸ್ಥೆಗೆ ಕ್ರಮ ತೆಗೆದುಕೊಳ್ಳಲಾಗುವುದೇ ;

(ಈ) ಈ ಸ್ಥಳಗಳಲ್ಲಿ ಕನ್ನಡ, ಇಂಗ್ಲೀಷ್, ಹಿಂದಿ ಬಾಷೆಗಳಲ್ಲಿ ದೊಡ್ಡದಾಗಿ ಎಚ್ಚರಿಕೆ ಫಲಕಗಳನ್ನು ಹಾಕುವುದರ ಮೂಲಕ ಪ್ರವಾಸಿಗರಿಗೆ ಮಾರ್ಗದರ್ಶನ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಉ) ಈ ಪ್ರವಾಸಿ ಸ್ಥಳಗಳಲ್ಲಿ ಸಮಾಜಘಾತುಕ ಶಕ್ತಿಗಳಿಂದ ಪ್ರವಾಸಿಗರಿಗೆ ಉಂಟಾಗುತ್ತಿರುವ ಕಿರುಕುಳ ತಪ್ಪಿಸಲು ಪೋಲೀಸ್ ಚೌಕಿ ಮತ್ತು ಬೀಟ್ ವ್ಯವಸ್ಥೆ ಕಲ್ಪಿಸುವಂತೆ ಪೋಲೀಸ್ ಇಲಾಖೆಗೆ ಪ್ರವಾಸೋದ್ಯಮ ಇಲಾಖೆಯಿಂದ ಪತ್ರ ಬರೆದು ಸೂಕ್ತ ವ್ಯವಸ್ಥೆ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟ

**ಶ್ರೀಮತಿ ಭಾರತಿ ಶೆಟ್ಟಿ (ವಿಧಾನಸಭೆಯಿಂದ ಚುನಾಯಿತರಾದವರು) –**

೬೪ (೨೩೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರ ಶಾಲೆಗಳಲ್ಲಿ ಮಧ್ಯಾಹ್ನದ ಬೇಸಿಗೆ ಬಿಸಿಯೂಟ ಯೋಜನೆ ಹಮ್ಮಿಕೊಂಡಿದೆಯೇ ; ಯೋಜನೆಯ ವಿವರ ನೀಡುವುದು ;

(ಆ) ಯೋಜನೆಗೆ ಬಿಡುಗಡೆ ಮಾಡಿರುವ ಹಣ ಎಷ್ಟು ; ವೆಚ್ಚ ಮಾಡಿರುವ ಹಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಯೋಜನೆ ನಿರೀಕ್ಷಿತ ಗುರಿ ಮುಟ್ಟಿದೆಯೇ ; ಇಲ್ಲದಿದ್ದಲ್ಲಿ ಕಾರಣವೇನು ;

(ಇ) ಪ್ರಚಾರದ ಕೊರತೆಯಿಂದಾಗಿ ಯೋಜನೆ ಯಶಸ್ವಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯೋಜನೆ ವಿಫಲವಾಗಲು ಕಾರಣಗಳೇನು ;

(ಈ) ಮಧ್ಯಾಹ್ನದ ಬೇಸಿಗೆ ಬಿಸಿಯೂಟ ಯೋಜನೆಯನ್ನು ಮುಂದಿನ ದಿನಗಳಲ್ಲಿ ಮುಂದುವರಿಸುವ ಕುರಿತು ಸರ್ಕಾರದ ನಿಲುವೇನು ?

## ಅಂಗನವಾಡಿ ಕೇಂದ್ರಗಳ ಮಂಜೂರಾತಿ

**ಶ್ರೀ ವೀರಕುಮಾರ್ ಅಪ್ಪಾಸೊ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೫ (೨೮೧) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾಂ ಜಿಲ್ಲೆಯಲ್ಲಿರುವ ಅಂಗನವಾಡಿ ಮತ್ತು ಮಿನಿ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ಈ ಪೈಕಿ ಸರ್ಕಾರಿ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿ ಕೇಂದ್ರಗಳ ಸಂಖ್ಯೆ ಎಷ್ಟು ;

(ಇ) ಉಳಿದ ಅಂಗನವಾಡಿ ಕೇಂದ್ರಗಳಿಗೆ ಎಂದಿನಿಂದ ಕಟ್ಟಡಗಳನ್ನು ಮಂಜೂರು ಮಾಡಲಾಗುವುದು ?

## ಶತಮಾನದ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಕೊರತೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೬೬ (೨೨೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ನೂರು ವರ್ಷಗಳಷ್ಟು ಹಳೆಯ ಸರ್ಕಾರಿ ಪ್ರಾಥಮಿಕ ಪಾಠ ಶಾಲೆಗಳು ಯಾವುವು ;

(ಆ) ಇವುಗಳಲ್ಲಿ ಶುದ್ಧ ನೀರು, ಶೌಚಾಲಯ, ವಿದ್ಯುತ್ ಸೌಕರ್ಯ, ಗ್ರಂಥಾಲಯ, ಸುಸಜ್ಜಿತ ಕೊಠಡಿ ಇವೇ ಮೊದಲಾದ ಮೂಲಭೂತ ಸೌಕರ್ಯಗಳು ಎಷ್ಟು ಶಾಲೆಗಳಲ್ಲಿವೆ ; (ವಿವರ ನೀಡುವುದು)

(ಇ) ಶತಮಾನದ ಶಾಲೆಗಳೆಂದು ಯಾವುದಾದರೂ ಶಾಲೆಗಳಿಗೆ ವಿಶೇಷ ಅನುದಾನ ಬಿಡುಗಡೆ ಮಾಡಲಾಗಿದೆಯೇ ? (ವಿವರ ನೀಡುವುದು)

**೧೩ನೇ ಹಣಕಾಸಿನ ಅನುದಾನ**

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೭ (೨೦೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯ ೩ ತಾಲ್ಲೂಕುಗಳಿಗೆ ಸೇರಿದಂತೆ ಗ್ರಾಮ, ತಾಲ್ಲೂಕು, ಜಿಲ್ಲಾ ಪಂಚಾಯ್ತಿಗಳಿಗೆ ೧೩ನೇ ಹಣಕಾಸಿನ ಅನುದಾನದಡಿ ಯಾವ ಯಾವ ಬಾಬ್ತುಗಳಿಗೆ ಅನುದಾನ ದೊರಕಿದೆ ; (ಪಂಚಾಯ್ತಿವಾರು ವಿವರ ನೀಡುವುದು)

(ಆ) ಅನುದಾನ ನೀಡಿದಲ್ಲಿ ಆಗಿರುವ ವೆಚ್ಚ, ಕಾಮಗಾರಿ ವಿವರ ನೀಡುವುದು ;

(ಇ) ಸದರಿ ಕಾಮಗಾರಿಗಳು ಈಗ ಯಾವ ಹಂತದಲ್ಲಿದೆ ? (ಕಾಮಗಾರಿವಾರು ವಿವರ ನೀಡುವುದು)

**ಗ್ರಾಮ ಪಂಚಾಯತ್‌ಗಳಲ್ಲಿ ವಿದ್ಯುತ್ ಬಿಲ್ಲುಗಳ ಬಾಕಿ**

**ಶ್ರೀ ಕೆ. ಮೋನಪ್ಪ ಭಂಡಾರಿ (ವಿಧಾನ ಸಭೆಯಿಂದ ಚುನಾಯಿತರಾದವರು) –**

೬೮ (೨೪೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗ್ರಾಮ ಪಂಚಾಯತಿಗಳಲ್ಲಿ ವಿದ್ಯುತ್ ಬಳಕೆ ಮಾಡಿರುವ ಬಿಲ್ಲನ್ನು ಪಾವತಿ ಮಾಡದೆ, ಇಂಧನ ಇಲಾಖೆಗೆ ಬಾಕಿ ಉಳಿಸಿಕೊಂಡಿವೆಯೇ ; ಬಾಕಿ ಇದ್ದರೆ, ಎಷ್ಟು ಪಂಚಾಯಿತಿಗಳು ಬಾಕಿ ಉಳಿಸಿಕೊಂಡಿವೆ ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯಾವ ಯಾವ ಗ್ರಾಮ ಪಂಚಾಯಿತಿಗಳಿಂದ ಬಿಲ್ ಪಾವತಿ ಮಾಡಲು ಬಾಕಿ ಇರುತ್ತದೆ ; ಹಾಗಿದ್ದಲ್ಲಿ, ಅದರ ಮೊತ್ತವೆಷ್ಟು ಹಾಗೂ ಎಷ್ಟು ಸಮಯದಿಂದ ಬಾಕಿ ಉಳಿಸಿಕೊಂಡಿದೆ ;

(ಇ) ಆ ರೀತಿಯಾಗಿ ವಿದ್ಯುತ್ ಬಿಲ್‌ಗಳು ಪಾವತಿಯಾಗದೆ ಬಾಕಿ ಇರಲು ಕಾರಣವೇನು ; ಪಂಚಾಯಿತಿಗಳಿಂದ ಪಾವತಿಯಾಗದೆ ಬಾಕಿಯಿರುವ ಬಿಲ್‌ಗಳನ್ನು ಸರ್ಕಾರವು ಪಾವತಿ ಮಾಡಲು ಏನಾದರೂ ಕ್ರಮ ಕೈಗೊಂಡಿದೆಯೇ? (ವಿವರ ನೀಡುವುದು)

## ರಾಜ್ಯದ ವಿಶ್ವವಿದ್ಯಾಲಯಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೬೯ (೨೦೫) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ವಿಶ್ವವಿದ್ಯಾನಿಲಯಗಳಿವೆ ; ಅದರ ಕುಲಪತಿಗಳ ವಿವರ ನೀಡುವುದು ;

(ಆ) ಯಾವ ಯಾವ ವಿಶ್ವವಿದ್ಯಾನಿಲಯಗಳ ಕುಲಪತಿಗಳ ವಿರುದ್ಧ ಭ್ರಷ್ಟಾಚಾರ ಆರೋಪ ಬಂದಿದೆ ? (ವಿವರ ನೀಡುವುದು)

## ಕುಡಚಿ–ಬಾಗಲಕೋಟೆ ರೈಲ್ವೆ ಮಾರ್ಗ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೦ (೨೮೪) ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕುಡಚಿ–ಬಾಗಲಕೋಟೆ ರೈಲ್ವೆ ಮಾರ್ಗದ ಮೂಲ ನಕ್ಷೆಯಲ್ಲಿ ಬದಲಾವಣೆ ಯಾಗಿರುವುದು ನಿಜವೇ ; ಹಾಗಿದ್ದರೆ, ಅದಕ್ಕೆ ಕಾರಣಗಳೇನು ;

(ಆ) ಬದಲಾವಣೆಯಾಗಿದ್ದರೆ, ಅದು ಯೋಜನೆಯ ವಿಳಂಬಕ್ಕೆ ಕಾರಣವಾಗಬಹುದೆ? (ವಿವರ ನೀಡುವುದು)

## ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಬಳಕೆದಾರರ ಶುಲ್ಕ

**ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು) –**

೭೧ (೨೧೨) ಮೂಲಸೌಲಭ್ಯ ಅಭಿವೃದ್ಧಿ, ವಾರ್ತಾ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದಲ್ಲಿನ ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕಾಗಿ ರಾಜ್ಯ ಸರ್ಕಾರವು ನೀಡಿದ ಜಮೀನು ಎಷ್ಟು ; ಇದಕ್ಕೆ ನಿಗದಿಪಡಿಸಿದ ಶುಲ್ಕ, ಅವಧಿ, ನಿರ್ಮಾಣದಲ್ಲಿ ರಾಜ್ಯ ಸರ್ಕಾರದ ಪಾಲು ಎಷ್ಟು ; (ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಪ್ರಸ್ತುತ ಈ ಅಂತರಾಷ್ಟ್ರೀಯ ವಿಮಾನನಿಲ್ದಾಣದಿಂದ ವಿಮಾನಗಳ ಹಾರಾಟ ಪ್ರಾರಂಭವಾದ ನಂತರ ಇದನ್ನು ಬಳಸಿದ ಪ್ರಯಾಣಿಕರ ಸಂಖ್ಯೆ ಮತ್ತು ನಡೆಸಲಾದ ವಾರ್ಷಿಕ ವಹಿವಾಟು ಎಷ್ಟು ; (ವರ್ಷವಾರು ಪ್ರತ್ಯೇಕ ವಿವರ ನೀಡುವುದು)

(ಇ) ಈ ವಿಮಾನ ನಿಲ್ದಾಣದಲ್ಲಿ ಬಳಕೆದಾರರ ಅಭಿವೃದ್ಧಿ ಶುಲ್ಕ (ಯು.ಡಿ.ಎಫ್.) ಹೆಚ್ಚಿನ ಪ್ರಮಾಣದಲ್ಲಿರುವ ಅಂಶವನ್ನು ಸರ್ಕಾರ ಗಮನಿಸಿದೆಯೇ ; ಹಾಗಿದ್ದಲ್ಲಿ, ಶುಲ್ಕ ಕಡಿಮೆ ನಿಗದಿಯಲ್ಲಿ ಸರ್ಕಾರದ ಆಲೋಚನೆಯೇನು ; (ಮಾಹಿತಿ ಒದಗಿಸುವುದು)

(ಈ) ಇದೇ ಸಮಯದಲ್ಲಿ ಬಹುತೇಕ ಕಾರ್ಯಾರಂಭವಾದ ಹೈದರಾಬಾದ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣವು ಈಗಾಗಲೇ ಬಹುತೇಕ ಎಲ್ಲಾ ಖರ್ಚು–ವೆಚ್ಚಗಳಿಂದ ಹೊರಬಂದು, ಯು.ಡಿ.ಎಫ್. ಶೂನ್ಯ–ಮಟ್ಟಕ್ಕೆ ಬಂದಿರುವ ಅಂಶವನ್ನು ಪರಿಗಣಿಸಿ, ಇಲ್ಲಿನ ನ್ಯೂನತೆಗಳನ್ನು ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರದ ಆಲೋಚನೆ ಏನು ? (ವಿವರ ಒದಗಿಸುವುದು)

## ಮಿನಿ ತಾರಾಲಯ ಸ್ಥಾಪನೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೭೨ (೨೮೮) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಿಜಾಪೂರ ನಗರವು ಐತಿಹಾಸಿಕ ಪ್ರವಾಸಿ ಕೇಂದ್ರವಾಗಿದ್ದು, ಮಿನಿ ತಾರಾಲಯ ಸ್ಥಾಪನೆಗೆ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ತೆಗೆದುಕೊಂಡ ಕ್ರಮವೇನು ?

## • ನಿವೇಶನ ರಹಿತರು

**ಶ್ರೀಮತಿ ಮೋಟಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) –**

೭೩ (೨೦೦) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೂಡಿಗೆರೆ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಮಂದಿ ನಿವೇಶನ ರಹಿತರಿದ್ದಾರೆ;

(ಆ) ನಿವೇಶನ ರಹಿತರಿಗೆ ನಿವೇಶನ ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಕಳೆದ ೨–೩ ವರ್ಷಗಳಿಂದ ಈ ವರೆವಿಗೂ ಎಷ್ಟು ಮಂದಿ ನಿವೇಶನ ರಹಿತರಿಗೆ ನಿವೇಶನ ವಿತರಿಸಲಾಗಿದೆ ? (ವಿವರ ನೀಡುವುದು)

## ಬಡ ಪ್ರತಿಭಾವಂತರಿಗೆ ತಾಂತ್ರಿಕ ಮತ್ತು ವೈದ್ಯಕೀಯ ಶಿಕ್ಷಣದ ಲಭ್ಯತೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೪ (೨೩೮) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತಾಂತ್ರಿಕ ಮತ್ತು ವೈದ್ಯಕೀಯ ಶಿಕ್ಷಣವನ್ನು ಬಡ ಪ್ರತಿಭಾವಂತರಿಗೆ ಲಭ್ಯವಾಗುವಂತೆ ಮಾಡಲು ಸರ್ಕಾರ ಕೈಗೊಂಡಿರುವ ಶಾಶ್ವತ ಕ್ರಮಗಳೇನು;

(ಆ) ಕೇಂದ್ರ ಸರ್ಕಾರಕ್ಕೆ ಈ ನಿಟ್ಟಿನಲ್ಲಿ ಹೊಸ ಕಾನೂನು ರೂಪಿಸಲು ಕೋರಲಾಗಿದೆಯೇ ;

(ಇ) ರಾಜ್ಯದಲ್ಲಿ ತಾಂತ್ರಿಕ ಮತ್ತು ವೈದ್ಯಕೀಯ ಶಿಕ್ಷಣ ಕಾಯ್ದೆಯನ್ನು ೨೦೧೪–೧೫ನೇ ಸಾಲಿನಲ್ಲಿ ಸೂಕ್ತ ತಿದ್ದುಪಡಿಯೊಂದಿಗೆ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಪ್ರವಾಸೋದ್ಯಮ ಫಲಾನುಭವಿಗಳು

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೫ (೨೯೬) ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಪ್ಪಳ ಜಿಲ್ಲೆಗೆ ಸಂಬಂಧಿಸಿದಂತೆ ಪ್ರವಾಸೋದ್ಯಮ ಇಲಾಖೆಯಲ್ಲಿ ಕಳೆದ (೫) ವರ್ಷಗಳಲ್ಲಿ ವಿವಿಧ ಯೋಜನೆಗಳಲ್ಲಿ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ವಿಲೆಯಾದ ಅರ್ಜಿಗಳ ಸಂಖ್ಯೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ವಿವರಗಳನ್ನು ತಾಲ್ಲೂಕುವಾರು ನೀಡುವುದು ;

(ಆ) ಬಾಕಿ ಇರುವ ಅರ್ಜಿಗಳು ಯಾವ ಕಾರಣಕ್ಕಾಗಿ ವಿಳಂಬವಾಗಿವೆ ; (ವಿವರ ನೀಡುವುದು)

(ಇ) ೨೦೧೨–೧೩ ರಿಂದ ಪ್ರಸಕ್ತ ಸಾಲಿನವರೆಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನಾಂಗದವರಿಂದ ಟ್ಯಾಕ್ಸಿ ಸಾಲ ಕುರಿತು ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ ;

(ಈ) ಅವುಗಳಲ್ಲಿ ಇದುವರೆಗೂ ಎಷ್ಟು ಜನ ಫಲಾನುಭವಿಗಳು ಆಯ್ಕೆಯಾಗಿದ್ದಾರೆ; ಆಯ್ಕೆಯಾದ ಫಲಾನುಭವಿಗಳಿಗೆ ಟ್ಯಾಕ್ಸಿ ವಿತರಿಸಲಾಗಿದೆಯೇ ; ಇಲ್ಲವಾದಲ್ಲಿ ಕಾರಣಗಳೇನು ;

(ಉ) ಪ್ರಸಕ್ತ ಸಾಲಿನಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆಯೇ ;

(ಊ) ಮಾಡಿದ್ದಲ್ಲಿ, ಅವರುಗಳ ವಿವರಗಳನ್ನು ನೀಡುವುದು ; ಹಾಗೂ ಅವರುಗಳಿಗೆ ಟ್ರ್ಯಾಕ್ಟರ್ ವಿತರಿಸಲಾಗಿದೆಯೇ ; (ತಾಲ್ಲೂಕುವಾರು ವಿವರ ನೀಡುವುದು)

(ಋ) ಇಲ್ಲವಾದಲ್ಲಿ, ವಿಳಂಬಕ್ಕೆ ಕಾರಣಗಳೇನು; ಫಲಾನುಭವಿಗಳ ಆಯ್ಕೆಯನ್ನು ಎಷ್ಟು ದಿನಗಳ ಒಳಗಾಗಿ ಮಾಡಲಾಗುವುದು ? (ವಿವರಗಳನ್ನು ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. 199, ಪ್ರತಿಗಳು 1000